**ಕರ್ನಾಟಕ ಸರ್ಕಾರ**

ಸಂಖ್ಯೆ:ಸಕಇ 10 ಎಂಡಿಎಸ್ 2025(P)

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸಸೌಧ, 2ನೇ ಮಹಡಿ,
ಡಾ|| ಬಿ.ಆರ್. ಅಂಬೇಡ್ಕರ್ ವೀಧಿ,
ಬೆಂಗಳೂರು,ದಿನಾಂಕ:19.09.2025.

**ಇವರಿಂದ:**

ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಮಾಜ ಕಲ್ಯಾಣ ಇಲಾಖೆ,
ಡಾ|| ಬಿ.ಆರ್. ಅಂಬೇಡ್ಕರ್ ವೀಧಿ,
ಬೆಂಗಳೂರು.

**ಇವರಿಗೆ:**

ಕಾರ್ಯನಿರ್ವಾಹಕ ನಿರ್ದೇಶಕರು,
ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ,
ಬೆಂಗಳೂರು.

Chadsu 20/9/25

**ಮಾನ್ಯರೇ,**

**ವಿಷಯ:** ರಾಜ್ಯದ ಎಲ್ಲಾ ಸರ್ಕಾರಿ/ಅರೆ ಸರ್ಕಾರಿ/ಸೇವಾ ಸಂಸ್ಥೆಗಳ ಕಟ್ಟಡಗಳ ಮೇಲೂ ಮಕ್ಕಳ ಸಹಾಯವಾಣಿ 1098 ಅನ್ನು ಕಡ್ಡಾಯವಾಗಿ ಪ್ರದರ್ಶಿಸಲು ಸೂಕ್ತ ನಿರ್ದೇಶನ ನೀಡುವ ಬಗ್ಗೆ.

**ಉಲ್ಲೇಖ:** ಡಾ.ತಿಪ್ಪೇಸ್ವಾಮಿ ಕೆ.ಟಿ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗರವರ ಪತ್ರ ದಿನಾಂಕ:26.08.2025.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರವನ್ನು ಇದರೊಂದಿಗೆ ಲಗತ್ತಿಸಿದೆ. ಸದರಿ ಪತ್ರದಲ್ಲಿ ಕರ್ನಾಟಕದ ಎಲ್ಲಾ ಸರ್ಕಾರಿ, ಅರೆ ಸರ್ಕಾರಿ, ಶೈಕ್ಷಣಿಕ ಸಂಸ್ಥೆಗಳು, ಖಾಸಗಿ ಸೇವಾ ಸಂಸ್ಥೆಗಳು ಸೇರಿದಂತೆ ಎಲ್ಲಾ ಕಟ್ಟಡಗಳ ಮೇಲೂ ಮಕ್ಕಳ ಸಹಾಯವಾಣಿ 1098 ಸಂಖ್ಯೆಯನ್ನು ಕಡ್ಡಾಯವಾಗಿ ಶಾಶ್ವತ ಫಲಕದಲ್ಲಿ ಪ್ರದರ್ಶಿಸಲು ಸೂಕ್ತ ನಿರ್ದೇಶನ ನೀಡುವಂತೆ ಕೋರಿರುತ್ತಾರೆ. ಅದರಂತೆ,ಕೂಡಲೇ ಅಗತ್ಯ ಕ್ರಮವಹಿಸುವಂತೆ ತಮಗೆ ತಿಳಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ವಿಶ್ವಾಸಿ,

Chalawadi

(ಸುಭಾಸ ಚಲವಾದಿ)
ಶಾಖಾಧಿಕಾರಿ ಬಿ-ಶಾಖೆ,
ಸಮಾಜ ಕಲ್ಯಾಣ ಇಲಾಖೆ.

ಕರ್ನಾಟಕ ಸರ್ಕಾರ

# ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ

4ನೇ ಮಹಡಿ, ಕೃಷಿ ಭವನ, ನೃಪತುಂಗ ರಸ್ತೆ, ರಾಣಿ ಚೆನ್ನಮ್ಮ ವೃತ್ತ, ಬೆಂಗಳೂರು- 560 001

ದೂರವಾಣಿ ಸಂಖ್ಯೆ: 080-22115290 E-mail: kscpcr@gmail.com

**ಡಾ. ತಿಪ್ಪೇಸ್ವಾಮಿ ಕೆ.ಟಿ.** ಸದಸ್ಯರು E-mail: thippeswamykscpcr@gmail.com

ಇವರಿಗೆ ದಿನಾಂಕ: 26-08-2025

ಮಾನ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು
ಕರ್ನಾಟಕ ಸರ್ಕಾರ.

ಮಾನ್ಯರೇ,

ವಿಷಯ: ರಾಜ್ಯದ ಎಲ್ಲಾ ಸರ್ಕಾರಿ/ ಅರೆ ಸರಕಾರಿ/ ಸೇವಾ ಸಂಸ್ಥೆಗಳ ಕಟ್ಟಡಗಳ ಮೇಲೂ ಮಕ್ಕಳ ಸಹಾಯವಾಣಿ 1098 ಅನ್ನು ಕಡ್ಡಾಯವಾಗಿ ಬರೆಸಲು ಸೂಕ್ತ ನಿರ್ದೇಶನ ನೀಡುವ ಬಗ್ಗೆ,

ಈ ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಮಕ್ಕಳ ಹಕ್ಕುಗಳ ರಕ್ಷಣೆ ಇಂದಿನ ತುರ್ತು ಅಗತ್ಯವಾಗಿದೆ. ಈ ಹಿನ್ನೆಲೆಯಲ್ಲಿ ಅನುಷ್ಠಾನಗೊಂಡಿರುವ ಮಿಷನ್ ವಾತ್ಸಲ್ಯ ಯೋಜನೆಯೂ ಮಕ್ಕಳ ಅಭಿವೃದ್ಧಿ ಹಾಗೂ ರಕ್ಷಣೆಯ ಆದ್ಯತೆಯನ್ನು ಸಾಧಿಸುವ ಒಂದು ಮಾರ್ಗವಾಗಿದ್ದು, ಸಂಕಷ್ಟದಲ್ಲಿನ ಹಾಗೂ ಸವಾಲಿನಲ್ಲಿರುವ ಮಕ್ಕಳ ಹಿತರಕ್ಷಣೆಗೆ ಹೆಚ್ಚು ಒತ್ತು ನೀಡುತ್ತಿದೆ. ಇಂತಹ ಮಕ್ಕಳ ಗುರುತಿಸುವಿಕೆ, ಸಂಕಷ್ಟ ಸ್ಥಿತಿಯಲ್ಲಿ ಮಾಹಿತಿ ಹಂಚಿಕೆ ಹಾಗೂ ಪುನರ್ವಸತಿ ಸೇವೆ ಒದಗಿಸುವಲ್ಲಿ ಮಕ್ಕಳ ಸಹಾಯವಾಣಿ 1098 ಮಹತ್ವದ ಪಾತ್ರವಹಿಸುತ್ತದೆ. ಈ ಸಂಖ್ಯೆಯನ್ನು ವ್ಯಾಪಕವಾಗಿ ಪ್ರಚಾರಮಾಡಿದಲ್ಲಿ ಬಾಲ್ಯವಿವಾಹ, ಬಾಲ ಕಾರ್ಮಿಕತೆ, ಸಂಕಷ್ಟದಲ್ಲಿನ ಮಕ್ಕಳ ರಕ್ಷಣೆ ಸೇರಿದಂತೆ ವಿವಿಧ ರೀತಿಯ ಮಕ್ಕಳ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸಲು ಸಾಧ್ಯವಾಗಲಿದೆ.

ಈ ಹಿನ್ನೆಲೆಯಲ್ಲಿ ಕರ್ನಾಟಕ ಸರ್ಕಾರದ ಎಲ್ಲಾ ಸರ್ಕಾರಿ, ಅರೆ ಸರಕಾರಿ, ಶೈಕ್ಷಣಿಕ ಸಂಸ್ಥೆಗಳು, ಖಾಸಗಿ ಸೇವಾ ಸಂಸ್ಥೆಗಳು ಸೇರಿದಂತೆ ಎಲ್ಲಾ ಕಟ್ಟಡಗಳ ಮೇಲೂ ಮಕ್ಕಳ ಸಹಾಯವಾಣಿ ಸಂಖ್ಯೆಯನ್ನು ಕಡ್ಡಾಯವಾಗಿ ಶಾಶ್ವತ ಫಲಕದಲ್ಲಿ ಪ್ರದರ್ಶಿಸಲು ತಾವು ಸೂಕ್ತ ನಿರ್ದೇಶನ ನೀಡಬೇಕೆಂದು ಕೋರುತ್ತೇನೆ. (ಈಗಾಗಾಲೇ ಕೆಲವು ಇಲಾಖೆಗಳು ಕ್ರಮವಹಿಸಿವೆ, ಇನ್ನೂ ಕೆಲವು ಕಡೆ ನಮ್ಮ ಇಲಾಖೆಯಲ್ಲಿ ಈ ಬಗ್ಗೆ ಯಾವುದೇ ನಿರ್ದೇಶನವಿಲ್ಲಾ ಎಂಬ ಗೊಂದಲಗಳಿವೆ) ತಮ್ಮ ಈ ನಿರ್ದೇಶನ ಇಡೀ ದೇಶದಲ್ಲಿಯೇ ಒಂದು ಮಾದರಿ ಕ್ರಮವಾಗಲಿದ್ದು ಮಕ್ಕಳ ರಕ್ಷಣೆಗೆ ವೇಗ ತರಲಿದೆ. ಈ ಸಂಬಂಧ ಎಲ್ಲಾ ಇಲಾಖೆಗಳಿಗೂ ಸೂಕ್ತ ನಿರ್ದೇಶನ ನೀಡಬೇಕೆಂದು ತಮ್ಮನ್ನು ವಿನಂತಿಸುತ್ತೇನೆ.

(ಈ ಪತ್ರದೊಂದಿಗೆ ಕೇಂದ್ರ ಸರ್ಕಾರದಿಂದ ಅನುಮೋದಿತವಾದ ಮಕ್ಕಳ ಸಹಾಯವಾಣಿ ಲೋಗೋ ಅನ್ನು ತಮ್ಮ ಅವಗಾಹನೆಗಾಗಿ ಲಗತ್ತಿಸಲಾಗಿದೆ.)

ವಂದನೆಗಳೊಂದಿಗೆ

ತಮ್ಮ ವಿಶ್ವಾಸಿ

(ಡಾ. ತಿಪ್ಪೇಸ್ವಾಮಿ ಕೆ.ಟಿ.)

ಪ್ರತಿಯನ್ನು:

1. ಮಾನ್ಯ ಅಧ್ಯಕ್ಷರು ಮತ್ತು ಕಾರ್ಯದರ್ಶಿಗಳು, ಕರಾಮಹರಆ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.

1098

CHILD

HELPLINE

24X7

## ಚೈಲ್ಡ್ ಲೈನ್ (ಮಕ್ಕಳ ಸಹಾಯವಾಣಿ):

18 ವರ್ಷದೊಳಗಿನ ಮಕ್ಕಳು ಯಾವುದೇ ರೀತಿಯ ಸಂಕಷ್ಟ, ತೊಂದರೆ, ದೈಹಿಕ/ಮಾನಸಿಕ ಶಿಕ್ಷೆ, ಹಿಂಸೆ/ನಿರ್ಲಕ್ಷ್ಯ/ ತಾರತಮ್ಯ ಹಾಗೂ ಲೈಂಗಿಕ ಆಧಾರಿತ ಯಾವುದೇ ರೀತಿಯ ಶೋಷಣೆಗೆ ಒಳಗಾದರೆ ತಕ್ಷಣ

## ಚೈಲ್ಡ್ ಲೈನ್‌ಗೆ ಕರೆ ಮಾಡಿ: 1098 ಅಥವಾ 112.

ಯಾವುದೇ ಮಕ್ಕಳು ಓಡಿಹೋದರೆ, ಕಾಣೆಯಾದರೆ, ಕಳ್ಳ ಸಾಗಾಣಿಕೆಗೆ ಒಳಪಟ್ಟರೆ, ದೌರ್ಜನ್ಯಕ್ಕೊಳಗಾದರೆ, ಜೀತ ಪದ್ಧತಿಯಲ್ಲಿದ್ದರೆ, ಬಾಲ ಮತ್ತು ಕಿಶೋರ ಕಾರ್ಮಿಕ ಪದ್ಧತಿಯಲ್ಲಿದ್ದರೆ, ಬಾಲ್ಯ ವಿವಾಹದ ಸಿದ್ಧತೆ ಅಥವಾ ಬಾಲ್ಯ ವಿವಾಹ ನಡೆಸಿದಲ್ಲಿ, ಭಿಕ್ಷಾಟನೆಯಲ್ಲಿದ್ದರೆ, ಬೀದಿಯಲ್ಲಿದ್ದರೆ, ನಿರಂತರ ಶಾಲೆಗೆ ಗೈರು ಹಾಜರಾದರೆ, ಯಾವುದೇ ವಿಪತ್ತಿಗೆ ಒಳಗಾದರೆ, ಮಾದಕ ವ್ಯಸನ, ಆನ್ ಲೈನ್ ಬೆದರಿಕೆ, ಜಾಲತಾಣ ಸಮಸ್ಯೆ, ಪೋಷಣೆ ಮತ್ತು ರಕ್ಷಣೆಯ ಅಗತ್ಯವಿದ್ದರೆ, ಹಾಗೂ ಕಾನೂನಿನೊಂದಿಗೆ ಸಂಘರ್ಷಕ್ಕೆ ಒಳಗಾದರೆ ಅವರ ಸಂರಕ್ಷಣೆಗಾಗಿ

## ತಕ್ಷಣ ಕರೆ ಮಾಡಿ; 1098. ತುರ್ತು ರಕ್ಷಣೆಗಾಗಿ 112

**(ಈ ದೂರವಾಣಿ ಉಚಿತ ಹಾಗೂ ದೂರು ನೀಡಿದವರ ವಿವರ ಖಂಡಿತ ಬಹಿರಂಗವಾಗುವುದಿಲ್ಲ, ಗೌಪ್ಯತೆಯನ್ನು ಕಾಪಾಡಲಾಗುವುದು).**

**ಹೆಚ್ಚಿನ ಮಾಹಿತಿ ಮತ್ತು ದೂರು ನೀಡಲು ಇವರನ್ನು ಸಂಪರ್ಕಿಸಿ:**

ಜಿಲ್ಲಾ ಮಕ್ಕಳ ರಕ್ಷಣಾ ಘಟಕ:____________________ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ:______

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ:_________________

ಹಿರಿಯ ಮಕ್ಕಳ ಕಲ್ಯಾಣ ಪೊಲೀಸ್ ಅಧಿಕಾರಿ:______________________

ತಾಲೂಕು ಮಕ್ಕಳ ರಕ್ಷಣಾಧಿಕಾರಿ (ಶಿಶು ಅಭಿವೃದ್ಧಿ ಯೋಜನಾಧಿಕಾರಿ):________

ತಾಲೂಕು ಕಾನೂನು ಸೇವಾ ಪ್ರಾಧಿಕಾರ:_________________

ಸಖಿ (ಮಹಿಳಾ ಸಹಾಯವಾಣಿ (ಸಾಂತ್ವನ) ಕೇಂದ್ರ):______________________

ಮುಖ್ಯೋಪಾಧ್ಯಯರು/ಕಾಲೇಜ್ ಪ್ರಾಂಶುಪಾಲರು/ನಿಲಯ ಪಾಲಕರು/ ಮೇಲ್ವಿಚಾರಕರು/ಮುಖ್ಯಸ್ಥರು/ಆಡಳಿತ ಮಂಡಳಿ.
ಶಿಕ್ಷಣ ಸಂಸ್ಥೆಯ/ಇಲಾಖೆಯ ಹೆಸರು:______________________________________________________

***ಸೂಚನೆ:*** 1. ಮೇಲಿನಂತೆ ಮಕ್ಕಳ ಸಹಾಯವಾಣಿ 1098 ಅಥವಾ 112 ಶಾಶ್ವತ ಫಲಕವನ್ನು ಎಲ್ಲಾ ಶಾಲೆ/ವಸತಿನಿಲಯ/ಶಿಕ್ಷಣ ಸಂಸ್ಥೆ/ಪದವಿ ಪೂರ್ವ ಕಾಲೇಜ್/ ಪದವಿ ಕಾಲೇಜ್/ಅಂಗನವಾಡಿ/ಎಲ್ಲಾ ಸರಕಾರಿ/ವಿವಿಧ ಇಲಾಖೆಗಳ ಅಥವಾ ಅರೆ ಸರಕಾರಿ ಕಛೇರಿಗಳ ಮುಂಭಾಗದಲ್ಲಿ ಎಲ್ಲಾ ಸಾರ್ವಜನಿಕರಿಗೆ/ಮಕ್ಕಳಿಗೆ ಕಾಣುವಂತೆ ಟಿನ್‌ನ ಬೋರ್ಡ್‌ನಲ್ಲಿ/ ಅಥವಾ ಕಟ್ಟಡದ ಗೋಡೆಯಲ್ಲಿ ಶಾಶ್ವತವಾಗಿ ಎಲ್.ಎಮ್.ಎಲ್ ಬಣ್ಣದಲ್ಲಿ ಬರೆಸಬೇಕು.

2. ಮೇಲಿನ ಇಲಾಖೆಗಳ ದೂರವಾಣಿ ಸಂಖ್ಯೆಗಳನ್ನು ನಿಮ್ಮ ಜಿಲ್ಲಾ ವ್ಯಾಪ್ತಿಯ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಕಛೇರಿಯಿಂದ ಪಡೆಯುವುದು.